# ಬೆಂಗಳೂರು ಉತ್ತರ ವಿಶ್ವವಿದ್ಯಾಲಯ

ಟಮಕ, ಕೋಲಾರ-563 103

ಸಂಖ್ಯೆ:ಬೆಂ.ಉ.ವಿ.ವಿ/ಆರೋಗ್ಯ ಸೇತು ಆಫ್/906/2020-21 ದಿನಾಂಕ:13.04.2020

## ಸುತ್ತೋಲೆ

ವಿಷಯ: **Arogya Setu Covid-19** ಆ್ಯಪ್‌ನ್ನು ಬಳಸುವ ಕುರಿತು.

ಉಲ್ಲೇಖ: 1) **UGC Letter No:D.O.No.1-1/2020(Secy) dated 10th April, 2020**

2) ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:13.04.2020

* * *

ಈ ಮೂಲಕ ವಿಶ್ವವಿದ್ಯಾಲಯದ ಎಲ್ಲಾ ಅಧಿಕಾರಿಗಳು, ಸ್ನಾತಕೋತ್ತರ ವಿಭಾಗಗಳ ಸಂಯೋಜಕರು, ಸಿಬ್ಬಂದಿಗಳಿಗೆ ಹಾಗೂ ಕಾಲೇಜು ಪ್ರಾಂಶುಪಾಲರಿಗೆ ತಿಳಿಸುವುದೇನೆಂದರೆ ಭಾರತ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯದ ಮೂಲಕ ಬಿಡುಗಡೆ ಮಾಡಿರುವ ದೃಡೀಕೃತ ಕೋರೋನಾ ವೈರಸ್ ಪಾಸಿಟಿವ್ ಪ್ರಕರಣಗಳ ಮಾಹಿತಿ ಪಡೆಯಲು Arogya Setu Covid-19 ಆ್ಯಪ್ ಕಾರ್ಯನಿರ್ವಹಿಸುತ್ತದೆ.

ಈ ಆಪ್‌ನ್ನು ios ಮತ್ತು Android ಸ್ಮಾರ್ಟ್ ಪೋನ್‌ನಲ್ಲಿ ಬಳಸಬಹುದಾಗಿದ್ದು ಡೌನ್‌ಲೋಡ್ ಮಾಡಿಕೊಂಡ ಬಳಿಕ ಬ್ಲೂಟೂತ್ ಮತ್ತು ಲೋಕೇಷನ್ ಆನ್ ಮಾಡಿರಬೇಕು. ಅದರಲ್ಲಿ ಸೆಟ್ ಲೋಕೇಶನ್ ಎಂದಿರುವುದನ್ನು Always ಎಂದು ಕೊಡಬೇಕು.

Arogya Setu Covid-19 ಆ್ಯಪ್‌ನ್ನು ವಿಶ್ವವಿದ್ಯಾಲಯದ ಬೋಧಕ-ಬೋಧಕೇತರ ಸಿಬ್ಬಂದಿಗಳು, ವಿದ್ಯಾರ್ಥಿಗಳು, ಕಾಲೇಜುಗಳ ಅಧ್ಯಾಪಕರು, ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಎಲ್ಲರೂ ಕಡ್ಡಾಯವಾಗಿ ಡೌನ್ ಲೋಡ್ ಮಾಡಿಕೊಂಡು ಬಳಸಿ ಇದರ ಪ್ರಯೋಜನ ಪಡೆಯಲು ನಿರ್ದೇಶನ ನೀಡುವಂತೆ ಈ ಮೂಲಕ ಸೂಚಿಸಲಾಗಿದೆ.

13/4/2020

ಕುಲಸಚಿವರು(ಪ್ರ)

ಕುಲಸಚಿವರು
ಬೆಂಗಳೂರು ಉತ್ತರ ವಿಶ್ವವಿದ್ಯಾಲಯ
ಟಮಕಾ, ಕೋಲಾರ-ಕರ್ನಾಟಕ-563 103.

ಗೆ,

1. ಎಲ್ಲಾ ಪ್ರಾಂಶುಪಾಲರುಗಳು
   ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ಸಂಯೋಜಿತ ಕಾಲೇಜುಗಳು
2. ಸಂಯೋಜಕರು, ಸ್ನಾತಕೋತ್ತರ ವಿಭಾಗಗಳು
   ಬೆಂಗಳೂರು ಉತ್ತರ ವಿಶ್ವವಿದ್ಯಾಲಯ

ಪ್ರತಿಗಳು:

1. ಆಪ್ತ ಕಾರ್ಯದರ್ಶಿಗಳು, ಕುಲಪತಿಗಳ ಕಛೇರಿ, ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಟಮಕ, ಕೋಲಾರ-563 103.
2. ಕುಲಸಚಿವರು (ಪ್ರ), ಕುಲಸಚಿವರ(ಮೌ), ವಿತ್ತಾಧಿಕಾರಿಗಳು(ಪ್ರ), ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಟಮಕ, ಕೋಲಾರ-563 103.
3. ಕಛೇರಿ ಪ್ರತಿ.